# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 955

ಸದಸ್ಯರ ಹೆಸರು : ಶ್ರೀ ಭೀಮರಾವ್ ಬಸವರಾಜ ಪಾಟೀಲ್

(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರಿಸಬೇಕಾದ ದಿನಾಂಕ : 24-02-2022

ಉತ್ತರಿಸಬೇಕಾದ ಸಚಿವರು : ಮಾನ್ಯ ಮುಖ್ಯ ಮಂತ್ರಿಗಳು

<table>
<tr><th>ಕ್ರ. ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಕೋವಿಡ್-19 ಸಂದರ್ಭದಲ್ಲಿ ಸರ್ಕಾರಿ ನೌಕರರು ಜೀವದ ಹಂಗನ್ನು ತೊರೆದು ಕೆಲಸ ನಿರ್ವಹಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;</td><td rowspan="3">ಹೌದು<br>ರಾಜ್ಯ ಸರ್ಕಾರವು ಸಾಂಪ್ರದಾಯಿಕವಾಗಿ ಕೇಂದ್ರ ವೇತನ ಆಯೋಗಗಳ ಶಿಫಾರಸ್ಸು ಹಾಗೂ ಕೇಂದ್ರ ವೇತನ ಪರಿಷ್ಕರಣೆಯ ಅವಧಿಯನ್ನು ಅನುಸರಿಸದೇ ತನ್ನದೇ ಆದ ವೇತನ ಆಯೋಗ/ವೇತನ ಸಮಿತಿಗಳ ಶಿಫಾರಸ್ಸಿನ ಮೇರೆಗೆ, ರಾಜ್ಯ ಸರ್ಕಾರಿ ನೌಕರರ ವೇತನ ಮತ್ತು ತುಟ್ಟಿಭತ್ಯೆಯೂ ಸೇರಿದಂತೆ ಇತರೆ ಭತ್ಯೆಗಳನ್ನು ಕಾಲದಿಂದ ಕಾಲಕ್ಕೆ ಪರಿಷ್ಕರಿಸಿಕೊಂಡು ಬರಲಾಗಿರುತ್ತದೆ. ಇದು ಸರ್ಕಾರದ ನೀತಿಯಾಗಿರುತ್ತದೆ.<br>ಕೇಂದ್ರ ಸರ್ಕಾರದ ನಿಯಮಗಳು ಮತ್ತು ಕೇಂದ್ರ ವೇತನ ಆಯೋಗದ ಶಿಫಾರಸ್ಸುಗಳು ರಾಜ್ಯ ಸರ್ಕಾರದ ನೌಕರರಿಗೆ ಅನ್ವಯಿಸುವುದಿಲ್ಲ. ಆದುದರಿಂದ, ಕೇಂದ್ರ ಸರ್ಕಾರದ ಹುದ್ದೆ ಮತ್ತು ಹುದ್ದೆಗಳಿಗೆ ನಿಗದಿಪಡಿಸಿರುವ ವೇತನ ಶ್ರೇಣಿ ಮತ್ತು ಭತ್ಯೆಗಳನ್ನು ರಾಜ್ಯ ಸರ್ಕಾರದ ಹುದ್ದೆಗಳಿಗೆ ಅನ್ವಯಿಸಿ ಹೋಲಿಸುವ ಪ್ರಶ್ನೆಯೇ ಉದ್ಭವಿಸುವುದಿಲ್ಲ.</td></tr>
<tr><td>ಆ)</td><td>ಬಂದಿದ್ದಲ್ಲಿ, ಸರ್ಕಾರಿ ನೌಕರರು ಹಲವು ದಿನಗಳಿಂದ ಕೇಂದ್ರ ಸರ್ಕಾರದ ಸಮನಾಂತರ ವೇತನ ಮತ್ತು ತುಟ್ಟಿಭತ್ಯೆಗಾಗಿ ಹೋರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;</td></tr>
<tr><td>ಇ)</td><td>ಬಂದಿದ್ದಲ್ಲಿ, ಕೇಂದ್ರ ಸರ್ಕಾರ ಸಮನಾಂತರ ವೇತನ ಮತ್ತು ತುಟ್ಟಿಭತ್ಯೆ ಹೆಚ್ಚಳ ಮಾಡಲು ಕೈಗೊಂಡ ಕ್ರಮವೇನು; ಇಲ್ಲದಿದ್ದಲ್ಲಿ ಕಾರಣಗಳೇನು? (ವಿವರ ನೀಡುವುದು)</td></tr>
</table>

ಸಂ: ಆಇ 10 ಎಸ್‌ಆರ್‌ಪಿ 2022

(ಬಸವರಾಜ ಬೊಮ್ಮಾಯಿ)

ಮುಖ್ಯಮಂತ್ರಿ